# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 23.09.2019 ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2019ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು :**

**ಅನುಪಸ್ಥಿತ ಸದಸ್ಯರು:**

## ಪ್ರಾರಂಭಿಕ

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿದರು.

**I ನಡಾವಳಿಗಳ ದೃಢೀಕರಣ:–**

ದಿನಾಂಕ 03.08.2019 ರಂದು ನಡೆದ 2019ನೇ ಸಾಲಿನ ಸಿಂಡಿಕೇಟಿನ ನಾಲ್ಕನೇ ಸಾಮಾನ್ಯ ಸಭೆಯ ನಡಾವಳಿಯ ಕುರಿತು ಸದಸ್ಯರಿಂದ ಯಾವುದೇ ಅಕ್ಷೇಪಣೆಗಳು ಬಾರದೆ ಇರುವುದರಿಂದ ಸದರಿ ನಡಾವಳಿಗಳನ್ನು ದೃಢೀಕರಿಸಲಾಯಿತು.

**II ಅನುಸರಣಾ ವರದಿಯ ಅನುಮೋದನೆ:–**

ದಿನಾಂಕ 25.06.2019 ರಂದು ನಡೆದ ಸಿಂಡಿಕೇಟಿನ 2019ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

**III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:-**

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:01(2019)

**ವಿಷಯ :** ಸ್ನಾತಕೋತ್ತರ ಭೂಗೋಳಶಾಸ್ತ್ರ ಅಧ್ಯಯನ ಮಂಡಳಿಯ ಪುನರ್‍ರಚನೆಯ ಬಗ್ಗೆ

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್‍ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:02(2019)

**ವಿಷಯ :** ಪದವಿ ಮತ್ತು ಸ್ನಾತಕೋತ್ತರ ಸೂಕ್ಷ್ಮಾಣುಜೀವವಿಜ್ಞಾನ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್‍ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್‍ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:03(2019)

**ವಿಷಯ :** ಎಂ.ಕಾಂ (ಹೆಚ್.ಆರ್.ಡಿ.) ಅಧ್ಯಯನ ಮಂಡಳಿಯ ಪುನರ್‍ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್‍ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:04(2019)

**ವಿಷಯ :** ಸ್ನಾತಕೋತ್ತರ ಅನ್ವಯಿಕ ಪ್ರಾಣಿಶಾಸ್ತ್ರ ಅಧ್ಯಯನ ಮಂಡಳಿಯ ಪುನರ್‌ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:05(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗಕ್ಕೆ ಪ್ರಭಾರ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.5:06(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮೂಹ ಸಂಹವನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗಕ್ಕೆ ಪ್ರಭಾರ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಸಾ.ಸ.5:07(2019)

**ವಿಷಯ :** ವಿಶ್ವವಿದ್ಯಾನಿಲಯದ ಅತಿಥಿಗೃಹಗಳಲ್ಲಿ ಪ್ರಸ್ತುತ ಇರುವ ಅಡುಗೆ ವ್ಯವಸ್ಥೆಯನ್ನು ಬದಲಾಯಿಸುವ ಬಗ್ಗೆ.

**ನಿರ್ಣಯ:** ಅಡುಗೆ ಹಾಗೂ ಹೌಸ್‌ಕೀಪಿಂಗ್‌ಗೆ ಸಂಬಂಧಿಸಿದಂತೆ ಅರ್ಹ ಸಂಸ್ಥೆ/ಗುತ್ತಿಗೆದಾರರರಿಂದ "Expression of Interest" ಆಹ್ವಾನಿಸಿ ಮುಂದಿನ ಕ್ರಮ ಜರುಗಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:08(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ Statute Relating to Absorption of Temporary Non-Teaching Employees Working in Mangalore University against Similar Sanctioned Posts of Mangalore University and Counting of Past Servicesರ ಅನುಮೋದನೆ ಬಗ್ಗೆ.

**ನಿರ್ಣಯ:** ಶೈಕ್ಷಣಿಕ ಮಂಡಳಿಯ ನಿರ್ಣಯವನ್ನು ಅಂತರ್ಗತಗೊಳಿಸಿ, ಕೆಲವು ತಿದ್ದುಪಡಿಗಳೊಂದಿಗೆ ಪರಿನಿಯಮ ಮಾರ್ಪಾಡುಗೊಳಿಸಿ ಸರ್ಕಾರಕ್ಕೆ ಸಲ್ಲಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:09(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಇಲೆಕ್ಟ್ರಾನಿಕ್ಸ್ ವಿಭಾಗದ IOT & Cloud Based System ಪ್ರಯೋಗಾಲಯಕ್ಕೆ ಧಾರಣಾಗುತ್ತಿಗೆ ದರದಲ್ಲಿ ಇಂಟರ್‌ನೆಟ್ ಪ್ಯಾಂಟ್ ಅಳವಡಿಕೆ ವೆಚ್ಚಕ್ಕೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:10(2019)

**ವಿಷಯ :** Nitte (Deemed to be University), Deralakatte, Mangalore ಇವರೊಂದಿಗೆ ಸಂಶೋಧನಾ ಸಹಕಾರಕ್ಕೆ ಸಂಬಂಧಿಸಿ ಒಡಂಬಡಿಕೆ ಮಾಡಿರುವುದಕ್ಕೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:11(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಗಣಕ ಯಂತ್ರ ಕೇಂದ್ರದಿಂದ ಆಡಳಿತ ಸೌಧಕ್ಕೆ ಇಂಟರ್‌ನೆಟ್ ಸಂಪರ್ಕ ಕಲ್ಪಿಸುವ OFC Cable ಅಳವಡಿಕೆ ವೆಚ್ಚಕ್ಕೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:12(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ಪ್ರೊ. ಜೋಗನ್‌ಶಂಕರ್ ಇವರ ಗೌರವಾರ್ಥ ದತ್ತಿ ಉಪನ್ಯಾಸ ನಿಧಿ" ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ: ಸಾ.ಸ.5:13(2019)

**ವಿಷಯ :** ಪಿಹೆಚ್.ಡಿ. ಪದವಿ ಪ್ರದಾನ ಮಾಡಿದ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ: ಸಾ.ಸ.5:14(2019)

**ವಿಷಯ :** ಎಪ್ರಿಲ್/ಮೇ/ಜೂನ್ 2019ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳು – ದಂಡನೆಯನ್ನು ದೃಢಪಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:15(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕುಲಸಚಿವ ಹುದ್ದೆಯ ಸಿಬ್ಬಂದಿಗಳಿಗೆ ಉಪಕುಲಸಚಿವ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

**ನಿರ್ಣಯ:** ಆಯ್ಕೆ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:**ಸಿಬ್ಬಂದಿ:ಸಾ.ಸ.5:16(2019)

**ವಿಷಯ :** ದಿನಾಂಕ 01.01.2016ರ ಪರಿಷ್ಕೃತ ಯುಜಿಸಿ 7ನೇ ವೇತನ ಶ್ರೇಣಿ/ ಸಂಬಂಧಿಸಿದ ಆದೇಶಗಳನ್ವಯ ಪರಿಷ್ಕೃತ ವೇತನ ಶ್ರೇಣಿಯ ವಿವಿಧ ಸೌಲಭ್ಯಗಳನ್ನು ವಿಸ್ತರಿಸಲು ರಚಿಸಿದ ಕರಡು ಪರಿನಿಯಮ/ಅನುಶಾಸನದ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:17(2019)

**ವಿಷಯ :** ಘಟಕ ಕಾಲೇಜಿನ ಬೋಧಕ ಸಿಬ್ಬಂದಿಗಳ ವರ್ಗಾವಣೆ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:18(2019)

**ವಿಷಯ :** ಶ್ರೀ ಕೆ. ಸುಧಾಕರ, ಶೀಘ್ರಲಿಪಿಗಾರರು, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಲೋಕಸಭಾ ಸದಸ್ಯರಾದ ಶ್ರೀ ನಳಿನ್ ಕುಮಾರ್ ಕಟೀಲ್ ಇವರ ಆಪ್ತ ಸಹಾಯಕರಾಗಿ ನಿಯೋಜನೆ ಮೇರೆಗೆ ನೇಮಿಸುವ ಬಗ್ಗೆ.

**ನಿರ್ಣಯ:** ಮಾನ್ಯ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರ ಅಧಿಕೃತ ಜ್ಞಾಪನದಂತೆ ಶ್ರೀ ಕೆ. ಸುಧಾಕರ, ಶೀಘ್ರಲಿಪಿಗಾರರು ಇವರನ್ನು ಮಾನ್ಯ ಲೋಕಸಭಾ ಸದಸ್ಯರಾದ ಶ್ರೀ ನಳಿನ್ ಕುಮಾರ್ ಕಟೀಲ್ ಇವರ ಆಪ್ತ ಸಹಾಯಕರಾಗಿ ನಿಯೋಜಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು: ಸಾ.ಸ.5:19(2019)

**ವಿಷಯ :** ಪದವಿ ಮತ್ತು ಸ್ನಾತಕೋತ್ತರ ಬಯೋಟೆಕ್ನಾಲಜಿ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:ಎಸಿಸಿ:**ಸಾ.ಸ.5:20(2019)

**ವಿಷಯ :** ಶೈಕ್ಷಣಿಕ ವರ್ಷ 2019–20ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕದ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.5:21(2019)

**ವಿಷಯ :** ಶೈಕ್ಷಣಿಕ ವರ್ಷ 2019–20ನೇ ಸಾಲಿಗೆ ಸಂಯೋಜಿತ ಕಾಲೇಜುಗಳಲ್ಲಿ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ/ವಿಭಾಗಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹವಿ:ಸಾ.ಸ.5:22(2019)

**ವಿಷಯ :** 2018–19ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.5:23(2019)

**ವಿಷಯ :** ಶೈಕ್ಷಣಿಕ ವರ್ಷ 2019–20ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲ್ಲಿ, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ ಮತ್ತು ಸ್ನಾತಕೋತ್ತರ ಕೇಂದ್ರ, ಚಿಕ್ಕ ಆಳುವಾರ, ಕುಶಾಲನಗರ ಇಲ್ಲಿ ನಡೆಸಲ್ಪಡುವ ಕೋರ್ಸ್‌ಗಳಿಗೆ ವಿದ್ಯಾರ್ಥಿ ಪರಿಮಿತಿ ನಿಗದಿಪಡಿಸಿರುವ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.5:24(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು ಹಾಗೂ ಬೋಧಕ ಹುದ್ದೆಗಳನ್ನು ಆದ್ಯತೆ ಮೇರೆಗೆ ವಿಷಯಗಳನ್ನು ಗುರುತಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:25(2019)

**ವಿಷಯ :** ಕಿರಿಯ ಅಭಿಯಂತರರ ಹುದ್ದೆಯಿಂದ ಸಹಾಯಕ ಅಭಿಯಂತರರ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:26(2019)

**ವಿಷಯ :** ಕಂಪ್ಯೂಟರ್ ಖರೀದಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:27(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಲ್ಲಿ ಮತ್ತು ಘಟಕ ಕಾಲೇಜುಗಳಲ್ಲಿ Smart Class ಸೌಲಭ್ಯ ಅಳವಡಿಸುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.5:28(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತದಲ್ಲಿ Campus Management System ನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.5:29(2019)

**ವಿಷಯ :** ವಿಶ್ವವಿದ್ಯಾನಿಲಯದ ಎಲ್ಲಾ ಖಾಯಂ ಸಿಬ್ಬಂದಿಗಳಿಗೆ ವೈದ್ಯಕೀಯ ವಿಮೆಯನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಎಲ್ಲಾ ಖಾಯಂ ಸಿಬ್ಬಂದಿಗಳಿಗೆ ಗ್ರೂಪ್ ಮೆಡಿಕಲ್ ಇನ್ಸೂರೆನ್ಸ್ ಮಾಡುವ ಬಗ್ಗೆ ಆಡಳಿತ ಸಿಬ್ಬಂದಿ ಹಾಗೂ ಶಿಕ್ಷಕರ ಸಭೆ ಕರೆದು ಚರ್ಚಿಸಿ ವಿಮಾ ಕಂಪೆನಿಗಳಿಂದ ದರಪಟ್ಟಿ ಪಡೆದು ಮುಂದಿನ ಸಿಂಡಿಕೇಟಿಗೆ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:30(2019)

**ವಿಷಯ :** ಕಿರಿಯ ಅಭಿಯಂತರರ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತಾದ ಕರಡು ಪರಿನಿಯಮದ ಪರಿಷ್ಕರಣೆ ಬಗ್ಗೆ.

**ನಿರ್ಣಯ:** ಕಿರಿಯ ಅಭಿಯಂತರರ ಹುದ್ದೆಯ ಪದೋನ್ನತಿಗೆ ಡಿಪ್ಲೋಮಾ ವಿದ್ಯಾರ್ಹತೆಯನ್ನೇ ನಿಗದಿಪಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.5:31(2019)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರ ಕಛೇರಿಯ ವಿವಿಧ ವಿಭಾಗಗಳಿಗೆ ಬೇಕಾದ FS Size ಮತ್ತು A4 Size ಪೇಪರುಗಳನ್ನು ಖರೀದಿಸುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.5:32(2019)

**ವಿಷಯ :** ಡಾ. ಕರುಣಾಕರ, ಪ್ರಾಧ್ಯಾಪಕರು ಹಾಗೂ ಅಧ್ಯಕ್ಷರು, ವಿಶ್ವವಿದ್ಯಾನಿಲಯ ವಿಜ್ಞಾನ ಉಪಕರಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರಿಗೆ ದಿನಾಂಕ 21.10.2019 ರಿಂದ 24.10.2019ರವರೆಗೆ CRP Headquarters in Vienna, Austria ಇಲ್ಲಿ ನಡೆಯಲಿರುವ First Research Coordination meeting ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರೆ ವಿಷಯಗಳು:**

Upgradation of Existing IBM Incubation Centre at Mangalore University ಬಗ್ಗೆ ಖರೀದಿ ಸಮಿತಿಯ ಶಿಫಾರಸ್ಸಿನಂತೆ ರಾಜ್ಯ ಸರ್ಕಾರದ ಅಂಗ ಸಂಸ್ಥೆಯಾದ KIONICS ಮೂಲಕ ಅನುಷ್ಠಾನಗೊಳಿಸಲು ನಿರ್ಣಯಿಸಲಾಯಿತು ಹಾಗೂ ಇದರ ಅನುಷ್ಠಾನವನ್ನು ಎರಡು ಹಂತಗಳಲ್ಲಿ ಕಾರ್ಯಗತಗೊಳಿಸಲು ಹಾಗೂ ತಗಲುವ ಈ ಕೆಳಗಿನ ವೆಚ್ಚಕ್ಕೆ ಸಿಂಡಿಕೇಟ್ ಸಭೆಯಲ್ಲಿ ಅನುಮೋದನೆ ನೀಡಲಾಯಿತು.

**Setting up of Data Centre**

| Sl. No. | Product Description | Price in INR |
|---|---|---|
| 1. | ISR (DC) | 1,37,39,280.00 |
| 2. | Lenovo Servers + Ethernet Switches | 67,20,000.00 |
| 3. | Storage | 1,40,18,306.00 |
| 4. | VM Ware Components | 17,64,000.00 |
| 5. | Installation, Commissioning & Training | 14,22,400.00 |
| | Total | **3,76,63,987.00** |

**The Second Phase for DR**

| Sl. No. | Product Description | Price in INR |
|---|---|---|
| 1. | ISR (DR) | 1,37,39,280.00 |
| 2. | Lenovo Servers + Ethernet Switches | 50,40,000.00 |
| 3. | Installation, Commissioning & Training | 13,44,000.00 |
| | Total | **2,01,23,280.80** |

ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/–
**ಕುಲಸಚಿವರು**

ಸಹಿ/–
**ಕುಲಪತಿಗಳು**